**ಹೆಚ್ಚುವರಿ ಸಿವಿಲ್ ನ್ಯಾಯಾಧೀಶರು ಮತ್ತು ಪ್ರಥಮ ದರ್ಜೆಯ ನ್ಯಾಯಿಕ ದಂಡಾಧಿಕಾರಿಯವರ ನ್ಯಾಯಾಲಯ, ಹೊನ್ನಾವರ. ಸಿ.ಸಿ ನಂ.297/2026.**

ಪಿರ್ಯಾದುದಾರರುಃ- ಜನತಾ ಕೋ-ಆಪರೇಟಿವ್ ಸೊಸೈಟಿ ಲಿಮಿಟೆಡ್,
ಶಾಖೆಃ ಮಂಕಿ, ತಾಃ ಹೊನ್ನಾವರ, (ಉ.ಕ),
ಪ್ರತಿನಿಧಿಸುವವರು ನಿಷ್ಪತ್ ಮ್ಯಾನೇಜರ್,
ಶ್ರೀ ಮಂಜುನಾಥ ಗೋವಿಂದ ಕೋಡಿಹಿತ್ಲು,
ವಯಸ್ಸು ಸುಮಾರು 54 ವರ್ಷ,
ಸಾಕೀನಃ ಕೋಡಿಹಿತ್ತಲು, ಪೋಸ್ಟಃ ಶಿರಾಲಿ,
ತಾಃ ಭಟ್ಕಳ, (ಉ.ಕ).

**-ವಿರುದ್ಧ-**

ಆರೋಪಿಯ ಹೆಸರುಃ- ಈಶ್ವರ ಮಂಜುನಾಥ ಖಾರ್ವಿ,
ವಯಸ್ಸು ಸುಮಾರು 40 ವರ್ಷ,
ಉದ್ಯೋಗಃ ರೈತಾಬಿ,
ಸಾಕೀನಃ- ಹೌಸ್ ನಂ.404, ಹಳೇಮಠ,
ಅಂಚೆಃ ಮಂಕಿ,
ತಾಲೂಕುಃ- ಹೊನ್ನಾವರ, (ಉ.ಕ).

****

**ಭಾರತೀಯ ನಾಗರಿಕ ಸುರಕ್ಷಾ ಸಂಹಿತೆ ಕಲಂ. 351 ರನ್ವಯ ಆರೋಪಿಯ ಹೇಳಿಕೆ.**

ಪ್ರಶ್ನೆಃ 1. ನೀವು ಪಿರ್ಯಾದುದಾರರ ಪರವಾಗಿ ಫ್ರಾಸಾ-1 ರವರ ಹೇಳಿಕೆಯನ್ನು ತಿಳಿದುಕೊಂಡಿದ್ದೀರಾ?

ಆರೋಪಿಯ ಉತ್ತರಃ- ತಿಳಿದುಕೊಂಡಿದ್ದೇನೆ

ಪ್ರಶ್ನೆಃ 2. ಫ್ರಾಸಾ-1 ರವರು ತಮ್ಮ ಸಾಕ್ಷ್ಯದಲ್ಲಿ, ಪಿರ್ಯಾದಿ ಸಂಸ್ಥೆಯಲ್ಲಿ ಗುಲಾಬಿ ಮಂಜುನಾಥ ಖಾರ್ವಿರವರು ರಂದು ರೂ.50,000/- ಸಾಲವನ್ನು ಪಡೆದುಕೊಂಡಿದ್ದು, ಸದರಿ ಸಾಲಕ್ಕೆ ಆರೋಪಿಯಾದ ನೀವು ಜಾಮೀನುದಾರರಿದ್ದು, ಸದ್ರಿ ಸಾಲವನ್ನು ಹಿಂತಿರುಗಿಸುವಂತೆ ಕೇಳಿದಾಗ, ಸದರಿ ಸಾಲಕ್ಕೆ ಸಂಬಂಧಪಟ್ಟಂತೆ ನೀವು ಪಿರ್ಯಾದಿ ಸಂಸ್ಥೆಯ ಹೆಸರಿಗೆ ನಿಮ್ಮ ಬ್ಯಾಂಕ್ ಖಾತೆಯುಳ್ಳ **ಇಂಡಿಯನ್ ಓವರಸಿಸ್ ಬ್ಯಾಂಕ್., ಹೊನ್ನಾವರ** ಶಾಖೆಯ ಚೆಕ್ ನಂ.491555 ನ್ನು ದಿನಾಂಕ 05-01-2026 ರಂದು ರೂ.69,300/- ಎಂದು ನಮೂದಿಸಿ ಚೆಕ್ ಗೆ ಸಹಿ ಮಾಡಿಕೊಟ್ಟು, ಸದರಿ ಚೆಕ್

ನ್ನು ಬ್ಯಾಂಕ್ ಗೆ ಹಾಜರುಪಡಿಸಿದ ಕೂಡಲೇ ಹಣ ಸಿಗುತ್ತದೆ ಎಂದು ಭರವಸೆ ನೀಡಿರುತ್ತೀರೆಂದು ಸಾಕ್ಷಿ ನುಡಿದಿರುತ್ತಾರೆ ಇದಕ್ಕೆ ನೀವೇನು ಹೇಳುವಿರಿ?

ಆರೋಪಿಯ ಉತ್ತರಃ- ಸುಳ್ಳು

ಪ್ರಶ್ನೆಃ 3. ಪ್ರಾಸಾ-1 ರವರು ಮುಂದುವರೆದು ತಮ್ಮ ಸಾಕ್ಷ್ಯದಲ್ಲಿ, ಪಿರ್ಯಾದಿ ಸಂಸ್ಥೆಯವರು ಹಣ ಪಡೆಯುವ ಸಲುವಾಗಿ ಸದರಿ ಚೆಕನ್ನು ಅವರ ಖಾತೆಯಿರುವ **ದಿ. ಭಟ್ಕಳ ಅರ್ಬನ್ ಕೋ-ಆಪರೇಟಿವ್ ಬ್ಯಾಂಕ್., ಮಂಕಿ** ಶಾಖೆಯಲ್ಲಿ ಹಾಜರುಪಡಿಸಿದಾಗ, ಸದರಿ ಬ್ಯಾಂಕ್ ನವರು, '**Drawers signature Differ**' ಎಂದು ತಿಳಿಸಿ ಸದರಿ ಚೆಕನ್ನು ದಿನಾಂಕ 08-01-2026 ರಂದು ಮೆಮೋದೊಂದಿಗೆ ವಾಪಾಸ್ ನೀಡಿರುತ್ತಾರೆ ಎಂದು ಸಾಕ್ಷಿ ನುಡಿದಿರುತ್ತಾರೆ ಇದಕ್ಕೆ ನೀವೇನು ಹೇಳುವಿರಿ?

ಆರೋಪಿಯ ಉತ್ತರಃ- ಸುಳ್ಳು

ಪ್ರಶ್ನೆಃ 4. ಪ್ರಾಸಾ-1 ರವರು ಮುಂದುವರೆದು ತಮ್ಮ ಸಾಕ್ಷ್ಯದಲ್ಲಿ, ಪಿರ್ಯಾದಿಯವರು ನಿಮಗೆ ವಕೀಲರ ಮೂಲಕ ದಿನಾಂಕ 19-01-2026 ರಂದು ರಿಜಿಸ್ಟರ್ ನೋಟಿಸ್ ಕಳುಹಿಸಿದ್ದು, ಸದರಿ ನೋಟಿಸ್ "Unclaimed" ಎಂಬ ಹಿಂಬರಹದೊಂದಿಗೆ ದಿನಾಂಕಃ 24-01-2026 ರಂದು ವಾಪಸ್ಸು ಬಂದಿದ್ದು, ನೀವು ಸದರಿ ಚೆಕ್ ನಲ್ಲಿ ನಮೂದಿಸಿದ ಹಣವನ್ನು ಸಹ ನೀಡಿರುವುದಿಲ್ಲ ಎಂದು ಸಾಕ್ಷಿ ನುಡಿದಿರುತ್ತಾರೆ ಇದಕ್ಕೆ ನೀವೇನು ಹೇಳುವಿರಿ?

ಆರೋಪಿಯ ಉತ್ತರಃ- ಸುಳ್ಳು

ಪ್ರಶ್ನೆ 5: ನಿಮ್ಮ ಪರವಾಗಿ ಏನಾದರೂ ಸಾಕ್ಷಿ ಇದೆಯೇ?

ಆರೋಪಿಯ ಉತ್ತರಃ- ಇದೆ

ಪ್ರಶ್ನೆ 6: ಸದ್ರಿ ಪ್ರಕರಣ ಕುರಿತು ನೀವು ಏನಾದರೂ ಹೇಳುವುದು ಇದೆಯೇ?

ಆರೋಪಿಯ ಉತ್ತರಃ-ಏನು ಇಲ್ಲ

(ಈ ಮೂಲಕ ಪ್ರಮಾಣಿಸುವುದೇನೆಂದರೆ ಆರೋಪಿಯು ಕೊಟ್ಟಂತ ಹೇಳಿಕೆಯ ಉತ್ತರವನ್ನು ಪಡೆಯಲಾಗಿದೆ)

ಸಹಿ ಇದೆ/-

**ದಿನಾಂಕಃ-28-07-2026.** **(ನವೀನ್ ಕೋಪರ್ಡೆ.,)**

**ಹೆಚ್ಚುವರಿ ಸಿವಿಲ್ ನ್ಯಾಯಾಧೀಶರು ಮತ್ತು**

**ಜೆ.ಎಮ್.ಎಫ್.ಸಿ., ನ್ಯಾಯಾಲಯ.,ಹೊನ್ನಾವರ.**

****

ಆರೋಪಿಯ ಸಹಿಃ- ಸಹಿ ಇದೆ